# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 422 (523) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 20.02.2023 |
| ಉತ್ತರಿಸುವ ಸಚಿವರು | : | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೋಲಾರ ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ 10 ಹಾಸಿಗೆಗಳ ಜಿಲ್ಲಾ ಸರ್ಕಾರಿ ಹೋಮಿಯೋಪತಿ ಆಸ್ಪತ್ರೆಯನ್ನು 50 ಹಾಸಿಗೆಗಳ ಆಯುಷ್ ಸಂಯುಕ್ತ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾಪವು ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಯಾವಾಗ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು; | ಪ್ರಸಕ್ತ ಹಣಕಾಸು ಪರಿಸ್ಥಿತಿಯಲ್ಲಿ ಹೆಚ್ಚುವರಿ ಹಣಕಾಸು ಕಾರ್ಯಭಾರವನ್ನು ಭರಿಸಲು ಅವಕಾಶವಾಗದಿರುವ ಹಿನ್ನೆಲೆಯಲ್ಲಿ ಸಧ್ಯಕ್ಕೆ ಪ್ರಸ್ತಾಪವು ಸರ್ಕಾರದ ಮುಂದಿರುವುದಿಲ್ಲ. |
| ಆ) | ಕೋಲಾರದಲ್ಲಿ 50 ಹಾಸಿಗೆಗಳ ಆಯುಷ್ ಸಂಯುಕ್ತ ಆಸ್ಪತ್ರೆಯನ್ನು ನಿರ್ಮಾಣ ಮಾಡಲು ಅವಶ್ಯಕವಿರುವ ಭೂಮಿಯು ಮಂಜೂರಾಗಿದೆಯೇ; ಇಲ್ಲವಾದಲ್ಲಿ ಯಾವಾಗ ಮಂಜೂರಾಗುವುದು; | ಕೋಲಾರದಲ್ಲಿ 50 ಹಾಸಿಗೆಗಳ ಆಯುಷ್ ಸಂಯುಕ್ತ ಆಸ್ಪತ್ರೆಯನ್ನು ನಿರ್ಮಾಣ ಮಾಡಲು ಅವಶ್ಯಕವಿರುವ ಭೂಮಿಯು ಮಂಜೂರಾಗಿರುವುದಿಲ್ಲ. |
| ಇ) | ಆಯುಷ್ ಇಲಾಖೆಯು ಈಗಾಗಲೇ ಭೂ ಕೋರಿಕೆ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿದ್ದರೂ ಸಹ ಇದುವರೆವಿಗೂ ಸೂಕ್ತ ಭೂಮಿಯನ್ನು ಮಂಜೂರು ಮಾಡದಿರಲು ಸೂಕ್ತ ಕಾರಣಗಳನ್ನು ನೀಡುವುದು; ಮತ್ತು ಜವಾಬ್ದಾರಿ ಯಾರದ್ದಾಗಿರುತ್ತದೆ; | ಕಂದಾಯ ಇಲಾಖೆಯು ಭೂಮಿಯನ್ನು ಮಂಜೂರು ಮಾಡಬೇಕಾಗಿದ್ದು, ಆ ಸಂಬಂಧ ಜಿಲ್ಲಾಧಿಕಾರಿ, ಕೋಲಾರ ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ಇವರಿಗೆ ಜಿಲ್ಲಾ ಆಯುಷ್ ಅಧಿಕಾರಿ, ಕೋಲಾರ ಇವರು ಪತ್ರ ಬರೆದಿರುತ್ತಾರೆ. |
| ಈ) | ಯಾವ ಕಾಲಮಿತಿಯೊಳಗೆ ಆಯುಷ್ ಆಸ್ಪತ್ರೆಗೆ ಅವಶ್ಯಕವಿರುವ ಭೂಮಿಯನ್ನು ಮಂಜೂರು ಮಾಡಲಾಗುವುದು? | |

ಸಂಖ್ಯೆ: ಆಕುಕ 60 ಪಿಐಎಂ 2023

(ಡಾ|| ಕೆ.ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು